**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**02.07.2024 / 18.40 hrs**

ಮುಖ್ಯಾಂಶಗಳು

**೧. ಪತ್ನಿಗೆ ಹಂಚಿಕೆಯಾಗಿರುವ ಮೂಡ ನಿವೇಶನ ಕಾನೂನು ಬದ್ಧವಾಗಿದೆ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ವಾಲ್ಮೀಕಿ ನಿಗಮದ ಹಗರಣ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ**

**೩. ಅತಿವೃಷ್ಟಿಯಿಂದ ಪ್ರಾಣಹಾನಿ ಸಂಭವಿಸಿದಂತೆ ಮುಂಜಾಗ್ರತಾ ಕ್ರಮವಹಿಸಿ - ಜಿಲ್ಲಾಧಿಕಾರಿಗಳಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೂಚನೆ**

**೪. ರಾಜ್ಯದ ಹಲವೆಡೆ ವಚನ ಪಿತಾಮಹ ಫ.ಗು. ಹಳಕಟ್ಟಿ ೧೪೪ನೇ ಜಯಂತಿ ಆಚರಣೆ**

**<><*<><>*><>**

ಪತ್ನಿಗೆ ಹಂಚಿಕೆಯಾಗಿರುವ ಮೂಡಾ ನಿವೇಶನ ಕಾನೂನು ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಬಿಜೆಪಿ ಅವಧಿಯಲ್ಲಿ ಈ ನಿವೇಶನ ಹಂಚಿಕೆಯಾಗಿದೆ ಎಂದು ತಿಳಿಸಿದ್ದಾರೆ. ಇಲ್ಲಿ ಯಾವುದೇ ಕಾನೂನಿನ ಉಲ್ಲಂಘನೆಯಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ತಮ್ಮ ಸಂಬಂಧಿ ಮಲ್ಲಿಕಾರ್ಜುನ ಖರೀದಿಸಿದ್ದ ಭೂಮಿಯನ್ನು ಪತ್ನಿ ಪಾರ್ವತಿಗೆ ಗಿಫ್ಟ್ ಡೀಡ್ ಮಾಡಿದ್ದರು. ಈ ಜಾಗವನ್ನು ಮೂಡ ಅಧಿಕಾರಿಗಳು ನಿವೇಶನ ಮಾಡಿದ್ದು, ೫೦-೫೦ ಅನುಪಾತದಲ್ಲಿ ನಿವೇಶನ ಹಂಚಿಕೆಯಾಗಿದೆ ಎಂದು ತಿಳಿಸಿದರು.

**<><*<><>*><>**

ವಾಲ್ಮೀಕಿ ನಿಗಮದ ಹಗರಣದ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ನೈತಿಕ ಹೊಣೆಹೊತ್ತು ರಾಜೀನಾಮೆ ನೀಡುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದ್ದಾರೆ. ಇಷ್ಟು ದೊಡ್ಡ ಹಗರಣ ನಡೆದರೂ ಹಣಕಾಸು ಇಲಾಖೆ ಗಮನಕ್ಕೆ ಬಂದಿಲ್ಲವೇಕೆ ಎಂದು ಪ್ರಶ್ನಿಸಿದ್ದಾರೆ. ಮುಖ್ಯಮಂತ್ರಿಗಳ ಗಮನಕ್ಕೆ ಬಾರದೇ ೧೮೭ ಕೋಟಿ ರೂಪಾಯಿ ಮೊತ್ತದ ಹಗರಣ ನಡೆಯಲು ಸಾಧ್ಯವೇ ಇಲ್ಲ. ಪ್ರಕರಣವನ್ನು ಸಿಬಿಐಗೆ ನೀಡಲು ಹಿಂದೇಟು ಯಾಕೆ ಎಂದು ಪ್ರಶ್ನಿಸಿದ ಅವರು, ನಾಳೆ ಮುಖ್ಯಮಂತ್ರಿಯವರ ನಿವಾಸಕ್ಕೆ ಮುತ್ತಿಗೆ ಹಾಕಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಮೈಸೂರಿನ ಮೂಡಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ೪ ಸಾವಿರ ಕೋಟಿ ಅವ್ಯವಹಾರ ಮಾಡಿದ್ದಾರೆಂದು ಆರ್. ಅಶೋಕ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಆರೋಪಿಸಿದ್ದಾರೆ. ೫೦-೫೦ ಅನುಪಾತದಲ್ಲಿ ನಿವೇಶನ ಹಂಚಿಕೆಗೆ ಅನುಮತಿ ನೀಡಿದ್ದು, ಯಾರು ಎಂದು ಪ್ರಶ್ನಿಸಿದ್ದಾರೆ.

**<><*<><>*><>**

ಪ್ರತಿಯೊಂದು ಜೀವ ಅಮೂಲ್ಯವಾಗಿದ್ದು, ಅತಿವೃಷ್ಟಿಯಿಂದ ಯಾವುದೇ ಪ್ರಾಣಹಾನಿ ಹಾಗೂ ಆಸ್ತಿಹಾನಿಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಮೈಸೂರಿನಲ್ಲಿ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಮಳೆಗಾಲದ ವಿಪತ್ತಿನಿಂದ ಸಾವು-ನೋವುಗಳು ಸಂಭವಿಸದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅತಿವೃಷ್ಟಿಯಿಂದಾಗಿರುವ ಪ್ರಾಣಹಾನಿ ಬೆಳೆಹಾನಿಗೆ ಎನ್‌ಡಿಆರ್‌ಎಫ್ ನಿಯಮಾವಳಿಗಳ ಅನ್ವಯ ಪರಿಹಾರವನ್ನು ಫಲಾನುಭವಿಗಳಿಗೆ ಸಕಾಲದಲ್ಲಿ ಪಾವತಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ರಾಜ್ಯದಲ್ಲಿ ಪೋಡಿ ಮುಕ್ತ ಗ್ರಾಮಗಳ ಗುರಿ ಸಾಧನೆಗೆ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

**<><*<><>*><>**

ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿಕೆಯನ್ನು ಅರ್ಥೈಸಿಕೊಳ್ಳುವಲ್ಲಿ ಬಿಜೆಪಿ ವಿಫಲವಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಹುಲ್ ಗಾಂಧಿ ಭಾಷಣದಲ್ಲಿ ಹಿಂದೂಧರ್ಮ ಎಲ್ಲರನ್ನೂ ಒಗ್ಗೂಡಿಸಿ, ಶಾಂತಿ ನೆಮ್ಮದಿಯಿಂದ ಸಮಾಜದ ಎಲ್ಲಾ ವರ್ಗವನ್ನು ಮುನ್ನಡೆಸಿಕೊಂಡು ಹೋಗಬೇಕಾದ ಸಾರಾಂಶ ಹೊಂದಿದೆ ಎಂದು ಸಮರ್ಪಿಸಿಕೊಂಡಿದ್ದಾರೆ. ರಾಹುಲ್‌ಗಾಂಧಿ ದೇಶದ ಹಿಂದೂಗಳ ಕ್ಷಮೆ ಕೇಳಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದ್ದಾರೆ. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಸಂಸದರು ತಮ್ಮ ಸ್ಥಾನದ ಘನತೆ ಎತ್ತಿ ಹಿಡಿಯುವ ಕೆಲಸ ಮಾಡಬೇಕು ಎಂದು ಹೇಳಿದರು. ರಾಹುಲ್ ಗಾಂಧಿ ಅವರು, ದೇಶದ ಅಸಂಖ್ಯಾತ ಹಿಂದುಗಳಿಗೆ ಅವಮಾನ ಮಾಡಿದ್ದಾರೆ ಎಂದು ದೂರಿದರು.

**<><*<><>*><>**

ಕರ್ನಾಟಕ ವಿಧಾನಸಭೆಯ ಸದಸ್ಯರಿಂದ ವಿಧಾನ ಪರಿಷತ್‌ನ ಒಂದು ಸ್ಥಾನಕ್ಕೆ ನಡೆಯಲಿರುವ ಉಪಚುನಾವಣೆಗೆ ಅಂತಿಮ ದಿನವಾದ ಇಂದು ಯಾವುದೇ ನಾಮಪತ್ರ ಸಲ್ಲಿಕೆಯಾಗಿಲ್ಲ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಬಸವನಗೌಡ ಬಾದರ್ಲಿ ಮೂರು ನಾಮಪತ್ರಗಳನ್ನು ಸಲ್ಲಿಸಿದ್ದಾರೆ ಎಂದು ವಿಧಾನಸಭೆ ಕಾರ್ಯದರ್ಶಿ ವಿಶಾಲಾಕ್ಷಿ ತಿಳಿಸಿದ್ದಾರೆ.

**<><*<><>*><>**

ರಾಜ್ಯದ ವಿವಿಧ ಚಾರಣಪಥಗಳಿಗೆ ಆನ್‌ಲೈನ್ ಮೂಲಕ ಟಿಕೆಟ್ ಬುಕ್ಕಿಂಗ್ ಮಾಡುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಮಾತನಾಡಿದ ಅವರು, ಜನವರಿ ೨೬ ರಂದು ಕುಮಾರ ಪರ್ವತಕ್ಕೆ ಸಾವಿರಾರು ಚಾರಣಿಗರು ಒಂದೇ ದಿನ ತೆರಳಿ ಗೊಂದಲ ಉಂಟಾದ ಹಿನ್ನೆಲೆಯಲ್ಲಿ ಸ್ಥಗಿತಗೊಳಿಸಲಾದ ಚಾರಣಕ್ಕೆ ಆಗಸ್ಟ್‌ನಲ್ಲಿ ಮರು ಚಾಲನೆ ನೀಡಲಾಗುವುದು ಎಂದು ಹೇಳಿದರು. ವಾರಾಂತ್ಯದಲ್ಲಿ ಚಾರಣಿಗರ ಸಂಖ್ಯೆ ಹೆಚ್ಚುತ್ತಿದ್ದು, ಪ್ಲಾಸ್ಟಿಕ್ ತ್ಯಾಜ್ಯದ ರಾಶಿಯು ಸಮಸ್ಯೆಯಾಗಿ ಪರಿಣಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಪರಿಸರ ಉಳಿಸಲು ಕೆಲವು ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**<><*<><>*><>**

ವಿಶ್ವ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ ನೀಡಿರುವ ಹಾಗೂ ಕನ್ನಡ ವಚನ ಸಾಹಿತ್ಯವನ್ನು ಜನತೆಗೆ ಪರಿಚಯಿಸಿದ ಡಾ. ಫ.ಗು. ಹಳಕಟ್ಟಿಯವರ ೧೪೪ನೇ ಜಯಂತಿಯನ್ನು ಇಂದು ರಾಜ್ಯಾದ್ಯಂತ ಆಚರಿಸಲಾಯಿತು. ಧಾರವಾಡದಲ್ಲಿ ನಡೆದ ಕಾರ್ಯಕ್ರಮದಲ್ಲಿ ೧೨ ನೇ ಶತಮಾನದ ಬಸವಾದಿ ಪ್ರಮಥರು ಬರೆದ ವಚನಗಳನ್ನು ಸಂರಕ್ಷಿಸಿ, ನಾಡಿಗೆ ಪರಿಚಯಿಸಿ ಪ್ರಚುರಪಡಿಸಿದ್ದು ಶರಣ ಫ.ಗು.ಹಳಕಟ್ಟಿ ಅವರು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಬಣ್ಣಿಸಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ವಚನ ಸಾಹಿತ್ಯಕ್ಕೆ ಡಾ. ಫ.ಗು. ಹಳಕಟ್ಟಿಯವರ ಸೇವೆ ಅವಿಸ್ಮರಣೀಯ ಎಂದು ಹೇಳಿದರು. ವಚನಗಳನ್ನು ಇಂದು ನಮಗೆಲ್ಲ ತಲುಪುವಂತೆ ಮಾಡಿದ ಡಾ.ಫ.ಗು.ಹಳಕಟ್ಟಿ ಅವರು ವಿಶ್ವವಿದ್ಯಾಲಯದ ರೀತಿ ಕೆಲಸ ಮಾಡಿದ್ದಾರೆಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಬಾಗಲಕೋಟೆಯಲ್ಲಿ ತಿಳಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಚನ ಪಿತಾಮಹ ಡಾ. ಫ.ಗು ಹಳಕಟ್ಟಿ ರವರ ೧೪೪ ನೇ ಜಯಂತಿ ಆಚರಿಸಲಾಯಿತು. ವಚನ ಪಿತಾಮಹ ಫ.ಗು.ಹಳಕಟ್ಟಿ ಅವರ ಅಪಾರ ಪರಿಶ್ರಮದ ಫಲವಾಗಿ ಕನ್ನಡ ಸಾಹಿತ್ಯ ಲೋಕಕ್ಕೆ ವಚನಗಳೆಂಬ ಅಮೂಲ್ಯ ರತ್ನಗಳು ದೊರೆತಿವೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ಕೊಪ್ಪಳ ಜಿಲ್ಲೆಯಲ್ಲಿ ವಚನ ಸಾಹಿತ್ಯ ಸಂರಕ್ಷಣೆಯಲ್ಲಿ ಫ.ಗು.ಹಳಕಟ್ಟಿ ಅವರ ಸಾಧನೆ ಜಗತ್ತಿಗೆ ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ್ ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಬಿಬಿಎಂಪಿ ವ್ಯಾಪ್ತಿಯಲ್ಲಿ ವೈಟ್‌ಟಾಪಿಂಗ್ ಕಾಮಗಾರಿಗೆ ಶೀಘ್ರ ಚಾಲನೆ ನೀಡಲಾಗುವುದು ಎಂದು ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಭೂಮಿ ಪೂಜೆಗಾಗಿ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವೈಟ್ ಟಾಪಿಂಗ್‌ನ ಅನ್ನು ೧೫ ಪ್ಯಾಕೇಜ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ಈ ಪೈಕಿ ೧೩ ಪ್ಯಾಕೇಜ್‌ಗಳು ಅಂತಿಮಗೊಂಡಿದ್ದು, ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಲಾಗಿದೆ ಎಂದು ಹೇಳಿದರು. ಕಾಮಗಾರಿ ಸಂಬಂಧ ಜಲಮಂಡಳಿಯ ನೀರು ಹಾಗೂ ಒಳಚರಂಡಿ, ಕೊಳವೆ, ಬೆಸ್ಕಾಂ ಹಾಗೂ ಕೆಪಿಟಿಸಿಎಲ್ ಕೇಬಲ್‌ಗಳು ಸೇರಿದಂತೆ ಇನ್ನಿತರ ಇಲಾಖೆಗಳ ಸ್ಥಳ ಸಮೀಕ್ಷೆ ನಡೆಸಿ ವರದಿ ಸಲ್ಲಿಸಲು ಸೂಚಿಸಿದ್ದಾರೆ. ಕಾಮಗಾರಿಯ ವೇಳೆ ವಾಹನ ಸಂಚಾರಕ್ಕೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ಹಂತ ಹಂತವಾಗಿ ಕಾರ್ಯ ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ರಾಷ್ಟ್ರೀಯ ಅಂಧತ್ವ ನಿವಾರಣ ಕಾರ್ಯಕ್ರಮದ ಅಡಿಯಲ್ಲಿ ವಿಜಯನಗರ ಜಿಲ್ಲೆಯಾದ್ಯಂತ ೯ ತಿಂಗಳಿನಿಂದ ಐದು ವರ್ಷದೊಳಗಿನ ಮಕ್ಕಳಿಗೆ ವಿಟಮಿನ್-ಎ ದ್ರಾವಣ ನೀಡಲಾಗುವುದು ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಜಂಬಯ್ಯ ತಿಳಿಸಿದ್ದಾರೆ. ಹಣ್ಣು ಮತ್ತು ತರಕಾರಿಗಳನ್ನು ಯಥೇಚ್ಛವಾಗಿ ಸೇವಿಸಿ ಇರುಳು ಕುರುಡುತನವನ್ನು ದೂರವಾಗಿಸಿ ಎಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

**<><*<><>*><>**

ಹಾವೇರಿ ನಗರಕ್ಕೆ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಸಮಗ್ರ ವರದಿ ನೀಡುವಂತೆ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹಾವೇರಿ ಜಿಲ್ಲಾ ಪಂಚಾಯತ್ ಸಭಾಗಂಣದಲ್ಲಿಂದು ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಈ ಕುರಿತಂತೆ ಜಿಲ್ಲಾಧಿಕಾರಿ ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತರದೆ ೨೦೧೪ ರಲ್ಲಿ ಮಂಜೂರಾದ ಕಾಮಗಾರಿಯ ಅವಧಿಯನ್ನು ೧೪ ಬಾರಿ ವಿಸ್ತರಣೆ ಮಾಡಲಾಗಿದೆ. ಕುಡಿಯುವ ನೀರು ಪೂರೈಕೆಗೆ ೩೦ ಕೋಟಿ ರೂಪಾಯಿ ಮಂಜೂರು ಮಾಡಲಾಗಿದ್ದು ಕಳೆದ ೯ ವರ್ಷಗಳಿಂದ ಕಾಮಗಾರಿ ಪೂರ್ಣಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**<><*<><>*><>**

ಜನವಸತಿ ಇರುವಲ್ಲಿ ಎಲ್ಲ ರೀತಿಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕೆಲಸ ಮಾಡಬೇಕೆಂದು ಅಬಕಾರಿ ಹಾಗೂ ಬಾಗಕಲೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪುರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕೃಷ್ಣ ಮೇಲ್ದಂಡೆ ಯೋಜನೆಯ ಪುನರ್‌ವಸತಿ ಭೂಸ್ವಾಧೀನ ವಿಷಯಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜನವಸತಿ ಇರುವಲ್ಲಿ ಕುಡಿಯುವ ನೀರು, ಶೌಚಾಲಯ, ಸ್ಮಶಾನದಂತಹ ಮೂಲಭೂತ ಸೌಕರ್ಯಗಳಿಗೆ ಮೊದಲ ಆದ್ಯತೆ ನೀಡಬೇಕು ಎಂದು ತಿಳಿಸಿದ್ದಾರೆ. ಪ್ರವಾಹ ಬರದೇ ಇರುವ ಸ್ಥಳಗಳಲ್ಲಿ ಕಟ್ಟಡ ನಿರ್ಮಾಣ ಮಾಡಿ ೫೨ ಕೋಟಿ ಹಣವನ್ನು ಪೋಲು ಮಾಡಲಾಗಿದೆ ಎಂದು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

**<><*<><>*><>**

೧.

ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕಿನ ಭೈರಾಪಟ್ಟಣದ ಸರ್ಕಾರಿ ಶಾಲಾ ಆವರಣದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

೨. ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯ ಎಸ್.ಕೆ.ವಂಟಗೋಡಿ, ವಿಜಯನಗರ ಜಿಲ್ಲೆಯ ವಿವಿಧ ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

೩.	೨೦೨೪-೨೫ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷಾ ಫಲಿತಾಂಶ ವೃದ್ಧಿಗೆ ಅಗತ್ಯ ಕಾರ್ಯಕ್ರಮಗಳನ್ನು ರೂಪಿಸಿಕೊಳ್ಳಬೇಕು ಎಂದು ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

೪.	ದೇಶದಲ್ಲಿ ಕಟ್ಟು ನಿಟ್ಟಾದ ಕಾಯ್ದೆ ಕಾನೂನುಗಳನ್ನು ಜಾರಿ ಮಾಡಿದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯವನ್ನು ತಡೆದು ರಕ್ಷಣೆ ನೀಡಲು ಸಹಕಾರಿಯಾಗಲಿದೆ ಎಂದು ಚಿಕ್ಕಮಗಳೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ. ಹನುಮಂತಪ್ಪ ತಿಳಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಧಾರಣವಾಗಿದ್ದು, ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಹಲವೆಡೆ ಮಳೆಯಾಗಿದೆ. ಭಾಗಮಂಡಲ ೮, ಉಪ್ಪಿನಂಗಡಿ, ಕದ್ರಾ, ಸಿದ್ದಾಪುರ, ಶಿರಾಳಿಯಲ್ಲಿ ತಲಾ ೫ ಸೆಂಟಿಮೀಟರ್ ಮಳೆಯಾಗಿದೆ. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ. ಬೆಂಗಳೂರು ಮತ್ತು ಸುತ್ತಮುತ್ತ ಮೋಡಕವಿದ ವಾತಾವರಣವಿದ್ದು, ಆಗಾಗ ಹಗುರಮಳೆ ನಿರೀಕ್ಷಿತ. ಗರಿಷ್ಠ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**